# ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು

(ಕರ್ನಾಟಕ ಸರ್ಕಾರದ ಅಧೀನದ ಸ್ವಾಯತ್ತ ಸಂಸ್ಥೆ)

**ವಿಕ್ಟೋರಿಯಾ ಆಸ್ಪತ್ರೆ ಆವರಣ, ಕೋಟೆ, ಬೆಂಗಳೂರು –560 002.**

gdcribangalore@gmail.com


ಸಂಖ್ಯೆ:ಸದಂಕಾಸಂಸಂ/ ಸಿ(1)/08/2013–14 ನಿರ್ದೇಶಕರು ಮತ್ತು ಡೀನ್ ರವರ ಕಾರ್ಯಾಲಯ,

ದಿನಾಂಕ: 23.11.2015

## ಅಧಿಸೂಚನೆ

ವಿಷಯ:– ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಮಾಡುವ ಬಗ್ಗೆ–ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ

ಉಲ್ಲೇಖ 1. ಸರ್ಕಾರದ ಪತ್ರ ಸಂಖ್ಯೆ:ಆಕುಕ 264 ಆರ್‌ಜಿಯು 2013 ದಿನಾಂಕ:13.03.2014

2. ಈ ಸಂಸ್ಥೆಯ ಅಧಿಸೂಚನೆ ಸಂಖ್ಯೆ:ಸದಂಕಾಸಂಸಂ/ಸಿ(1)/08/2013–14 ದಿನಾಂಕ:21.08.2014
3. ಆಯ್ಕೆ ಸಮಿತಿ ಸಭೆ ನಡವಳಿ ದಿನಾಂಕ:08.09.2015
4. ತಾತ್ಕಾಲಿಕ ಆಯ್ಕೆ ಪಟ್ಟಿಯ ಅಧಿಸೂಚನೆ ದಿನಾಂಕ: 17.10.2015

-------

ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಬೋಧಕ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಭಾರತೀಯ ದಂತ ಪರಿಷತ್ತಿನ ನಿಯಮಾವಳಿಯಂತೆ ಹಾಗೂ ಉಲ್ಲೇಖಿತ ಸರ್ಕಾರಿ ಪತ್ರ(1)ರನ್ವಯ ಈ ಸ್ವಾಯತ್ತ ಸಂಸ್ಥೆಯಲ್ಲಿ ಖಾಲಿಯಿರುವ 10 ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ರೂ.15600–39100+6000 ಎಜಿಪಿ ವೇತನ ಶ್ರೇಣಿಯಲ್ಲಿ ಭರ್ತಿ ಮಾಡುವ ಸಲುವಾಗಿ ಉಲ್ಲೇಖ(2)ರ ದಿನಾಂಕ:21.08.2014ರ ಅಧಿಸೂಚನೆಯಲ್ಲಿ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಅರ್ಹ ಅಭ್ಯರ್ಥಿಗಳಲ್ಲಿ ಎಂ.ಡಿ.ಎಸ್ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಚಾಲ್ತಿಯಲ್ಲಿರುವ ಮೀಸಲಾತಿಗೊಳಪಟ್ಟು 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆದು ದಿನಾಂಕ:02.12.2014ರಂದು ಸಂದರ್ಶನ ನಡೆಸಲಾಯಿತು. ಸಂದರ್ಶನಕ್ಕೆ ಗರಿಷ್ಠ 15 ಅಂಕಗಳನ್ನು ನಿಗದಿ ಮಾಡಲಾಗಿತ್ತು. ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳ ಶೇಕಡವಾರನ್ನು ಶೇಕಡಾ 85ಕ್ಕೆ ಲೆಕ್ಕಾಚಾರ ಮಾಡಿ ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳನ್ನು ಒಟ್ಟುಗೂಡಿಸಿ ಮೆರಿಟ್ ಪಟ್ಟಿಯನ್ನು ತಯಾರಿಸಿ ಅದೇ ದಿನ ಸಂಸ್ಥೆಯ ವೆಬ್‌ಸೈಟ್ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿರುತ್ತದೆ.

ಶ್ರೀ ಆರ್.ಮೋಹನ್‌ರಾಜ್, ರಾಜ್ಯ ಸಂಚಾಲಕರು, ದಲಿತ ಸಂಘರ್ಷ ಸಮಿತಿ ಇವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಸಲ್ಲಿಸಿರುವ ಅರ್ಜಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯನ್ನು ನೇಮಕಾತಿ ಸಮಿತಿಯ ಹೊರಗಿಟ್ಟು ನೇಮಕಾತಿ ಪ್ರಕ್ರಿಯೆ ನಡೆಸಿರುವುದಾಗಿ, ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು ದಿನಾಂಕ:03.12.2014ರಂದು ಈ ಸಂಸ್ಥೆಗೆ ಪತ್ರ ಬರೆದು ಸಂಸ್ಥೆಯಲ್ಲಿ ನೇರ ನೇಮಕಾತಿ ಸಮಿತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯನ್ನು ಸದಸ್ಯರನ್ನಾಗಿ ಸೇರಿಸಿಕೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಬೇಕೆಂದು ಹಾಗೂ ಅಲ್ಲಿಯವರೆಗೆ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಬೇಕೆಂದು ಸೂಚಿಸಿರುತ್ತಾರೆ. ಆದರೂ ಕೂಡ ಸಂಸ್ಥೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯ ಅನುಪಸ್ಥಿತಿಯಲ್ಲಿ ನೇಮಕಾತಿ ಪ್ರಕ್ರಿಯೆ ನಡೆದಿರುವುದಾಗಿ ಮತ್ತು ಇತರೆ ಅಂಶಗಳನ್ನು ಅರ್ಜಿಯಲ್ಲಿ ತಿಳಿಸಿರುತ್ತಾರೆ. ಸದರಿ ವಿಷಯಗಳ ಬಗ್ಗೆ ಸಮಿತಿಯು ಶೀಘ್ರದಲ್ಲೇ ಸಭೆ ಸೇರಿ ಪರಿಶೀಲನೆ ನಡೆಸಲಿದೆ.